ಕರ್ನಾಟಕ ವಿಧಾನ ಪರಿಷತ್ತು

ಲಘು ಪ್ರಕಟಣೆ ಭಾಗ-2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಬುಧವಾರ, ದಿನಾಂಕ: 05.11.2022

ಸಂಖ್ಯೆ: 145

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 242(ಎ) ರ ರೀತ್ಯಾ ಡಾ: ವೈ.ಎ. ನಾರಾಯಣಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ದಿನಾಂಕ: 21.01.2021ರಂದು ವಿಶೇಷ ಸದನ ಸಮಿತಿಯನ್ನು ರಚಿಸಲಾಗಿರುತ್ತದೆ.

ಮಾನ್ಯ ಶಾಸಕರಾದ ಡಾ: ವೈ.ಎ. ನಾರಾಯಣಸ್ವಾಮಿ ರವರನ್ನು ದಿನಾಂಕ: 15.03.2022ರಂದು ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರನ್ನಾಗಿ ಮಾಡಿದ ಹಿನ್ನಲೆಯಲ್ಲಿ, ಸದರಿ ಸಮಿತಿಯ ಅಧ್ಯಕ್ಷರನ್ನಾಗಿ ಮಾನ್ಯ ಶಾಸಕರಾದ ಶ್ರೀ ಹಣಮಂತ ರುದ್ರಪ್ಪ ನಿರಾಣಿ ಇವರನ್ನು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 194(5)ರ ಅನ್ವಯ ಮಾನ್ಯ ಸಭಾಪತಿಯವರು ನಾಮ ನಿರ್ದೇಶನ ಮಾಡಿರುತ್ತಾರೆಂದು ಈ ಮೂಲಕ ಎಲ್ಲಾ ಮಾನ್ಯ ಶಾಸಕರುಗಳಿಗೆ ತಿಳಿಯಪಡಿಸಲಾಗಿದೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಿಗೆ.

www.kla.kar.nic.in/council/council.htm